ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ರಾಜ್ಯದ ವಿಶ್ವವಿದ್ಯಾಲಯಗಳ ಮೂಲಭೂತ ಹಾಗೂ ಆಡಳಿತಾತ್ಮಕ ಸಮಸ್ಯೆಗಳ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

420 (548) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ ಸರ್ಕಾರವು ಹಲವಾರು ವಿಶ್ವವಿದ್ಯಾಲಯಗಳನ್ನು ಆರಂಭಿಸಿದ್ದು, ಅವುಗಳಲ್ಲಿ ಹಲವಾರು ವಿಶ್ವವಿದ್ಯಾಲಯಗಳು ಮೂಲಭೂತ ಹಾಗೂ ಆಡಳಿತಾತ್ಮಕ ಸಮಸ್ಯೆಗಳನ್ನು ಎದುರಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ವಿಶ್ವವಿದ್ಯಾಲಯಗಳಿವೆ; (ಮಾಹಿತಿ ಒದಗಿಸುವುದು)

(ಇ) ಎಷ್ಟು ವಿಶ್ವವಿದ್ಯಾಲಯಗಳು ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ಹಾಗೂ ಎಷ್ಟು ವಿಶ್ವವಿದ್ಯಾಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ;

(ಈ) ಒಟ್ಟು ಎಷ್ಟು ವಿಶ್ವವಿದ್ಯಾಲಯಗಳಲ್ಲಿ ಉಪ ಕುಲಪತಿಗಳ ಹುದ್ದೆ ಖಾಲಿ ಇವೆ; ಇವುಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಉಪ ಕುಲಪತಿಗಳ ಹುದ್ದೆ ಭರ್ತಿ ಮಾಡಲು ಇರುವ ಮಾನದಂಡಗಳೇನು; (ಮಾಹಿತಿ ಒದಗಿಸುವುದು)

(ಊ) ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಬೋಧಕ ಹುದ್ದೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಋ) ಬಂದಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?